## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಹುಕ್ಕೇರಿ, ಜಬಾಪುರ, ನೇರ್ಲಿ, ಮಸರಗುಪ್ಪಿ ಮತ್ತು ಅರ್ಜುನವಾಡ ಗ್ರಾಮಗಳ 1200 ಹೆಕ್ಟೇರ್ ಪ್ರದೇಶಕ್ಕೆ ಹಿರಣ್ಯಕೇಶಿ ನದಿಯಿಂದ ನೀರನ್ನು ಎತ್ತಿ ನೀರಾವರಿ ಕಲ್ಪಿಸುವ 0.11 ಟಿಎಂಸಿ ನೀರಿನ ಹಂಚಿಕೆಯ ಶ್ರೀ ಶಂಕರಲಿಂಗ ಏತ ನೀರಾವರಿ ಯೋಜನೆಯ ರೂ.67.40 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

***

**ಓದಲಾಗಿದೆ:**

1. ವ್ಯವಸ್ಥಾಪಕ ನಿರ್ದೇಶಕರು, ಕನೀನಿನಿ, ಇವರ ಪತ್ರ ಸಂಖ್ಯೆ: ಕನೀನಿನ/ತಾಂತ್ರಿಕ/ಟಿಜಿಸಿ/1136/ 2019-20/6268, ದಿನಾಂಕ: 04.02.2020.
2. ವ್ಯವಸ್ಥಾಪಕ ನಿರ್ದೇಶಕರು, ಕನೀನಿನಿ, ಇವರ ಪತ್ರ ಸಂಖ್ಯೆ: ಕನೀನಿನ/ತಾಂತ್ರಿಕ/ಟಿಜಿಸಿ/1136/ 2019-20/3751, ದಿನಾಂಕ: 04.11.2020.
3. ಸರ್ಕಾರದ ಪತ್ರ ಸಂಖ್ಯೆ: ಜಸಂಇ 10 ಎನ್ ಐಎನ್ 2016, ದಿನಾಂಕ:03.06.2017.

**ಪ್ರಸ್ತಾವನೆ:**

ಮೇಲೆ ಓದಲಾದ(1)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು, ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಹುಕ್ಕೇರಿ, ಜಬಾಪುರ, ನೇರ್ಲಿ, ಮಸರಗುಪ್ಪಿ ಮತ್ತು ಅರ್ಜುನವಾಡ ಗ್ರಾಮಗಳ 1200 ಹೆಕ್ಟೇರ್ ಪ್ರದೇಶಕ್ಕೆ ಹಿರಣ್ಯಕೇಶಿ ನದಿಯಿಂದ ನೀರನ್ನು ಎತ್ತಿ ನೀರಾವರಿ ಕಲ್ಪಿಸುವ 0.11 ಟಿಎಂಸಿ ನೀರಿನ ಬಳಕೆಯ ಶ್ರೀ ಶಂಕರಲಿಂಗ ಏತ ನೀರಾವರಿ ಯೋಜನೆಗೆ ಪ್ರಸ್ತುತ ಚಾಲ್ತಿಯಲ್ಲಿರುವ ದರಪಟ್ಟಿಯನ್ವಯ ಮಾರ್ಪಡಿಸಿ, ವಿವರವಾದ ಯೋಜನಾ ವರದಿಯನ್ನು ರೂ.67.40 ಕೋಟಿಗಳಿಗೆ ತಯಾರಿಸಿ ಆಡಳಿತಾತ್ಮಕ ಅನುಮೋದನೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

2. ಮೇಲೆ ಓದಲಾದ(2)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು, ದಿನಾಂಕ:03.03.2020ರಂದು ನಡೆದ ನಿಗಮದ ಅಂದಾಜು ಪರಿಶೀಲನಾ ಸಮಿತಿಯ 68ನೇ ಸಭೆಯಲ್ಲಿನ ಶಿಫಾರಸ್ಸಿನಂತೆ, ದಿನಾಂಕ: 05.10.2020 ರಂದು ಜರುಗಿದ ನಿಗಮದ ನಿರ್ದೇಶಕರ ಮಂಡಳಿಯ 93ನೇ ಸಭೆಯಲ್ಲಿ ಸದರಿ ಯೋಜನೆಯ ವಿವರವಾದ ಯೋಜನಾ ವರದಿಯನ್ನು 2018-19ನೇ ಸಾಲಿನ ದರಪಟ್ಟಿಯನ್ವಯ ರೂ67.40 ಕೋಟಿಗಳ ಯೋಜನೆಯ ಅಂದಾಜಿಗೆ ಅವಶ್ಯಕವಿರುವ ನೀರಿನ ಹಂಚಿಕೆಗೆ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆದುಕೊಳ್ಳುವ ಷರತ್ತಿಗೊಳಪಟ್ಟು, ಮಂಡಳಿಯು ಅನುಮೋದನೆ ನೀಡಿ, ಇದಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತದೆ. ಮಂಡಳಿಯ ಶಿಫಾರಸ್ಸಿನಂತೆ, ಶ್ರೀ ಶಂಕರಲಿಂಗ ಏತ ನೀರಾವರಿ ಯೋಜನೆಗೆ ಅವಶ್ಯವಿರುವ 0.11 ಟಿ.ಎಂ.ಸಿ. ನೀರಿನ ಹಂಚಿಕೆಯೊಂದಿಗೆ ರೂ.67.40 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಗೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ಆಡಳಿತಾತ್ಮಕ ಅನುಮೋದನೆಯನ್ನು ಕೋರಿರುತ್ತಾರೆ.

4. ಘಟಪ್ರಭಾ ಬಲದಂಡೆ ಕಾಲುವೆ ವ್ಯಾಪ್ತಿಯಡಿ ನೀರಾವರಿಯಾಗದೇ ಅಧಿಸೂಚಿತ ಕ್ಷೇತ್ರ ಒಟ್ಟು 4095 ಹೆ. ಜಮೀನುಗಳಿಂದ ಉಳಿಯುವ ಸುಮಾರು 0.75 ಟಿಎಂಸಿ ನೀರಿನ ಲಭ್ಯತೆಗನುಗುಣವಾಗಿ, ಮೇಲೆ ಓದಲಾದ(3)ರ ಪತ್ರದಲ್ಲಿ, ಶ್ರೀ ಶಂಕರಲಿಂಗ ಏತ ನೀರಾವರಿ ಯೋಜನೆಗೆ 0.11 ಟಿಎಂಸಿ ಮತ್ತು ಅಡವಿ ಸಿದ್ದೇಶ್ವರ ಏತ ನೀರಾವರಿ ಯೋಜನೆಗೆ 0.11 ಟಿಎಂಸಿ ನೀರಿನ ಹಂಚಿಕೆಯನ್ವಯ ವಿವರವಾದ ಯೋಜನಾ ವರದಿ ತಯಾರಿಸಿ ನಿಯಮಾನುಸಾರ ಅಗತ್ಯ ಕ್ರಮ ವಹಿಸಲು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರನ್ನು ಕೋರಲಾಗಿತ್ತು.

ಈ ಹಿನ್ನಲೆಯಲ್ಲಿ, ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಲಾಗಿದೆ:-

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 96 ಎನ್ಐಎನ್ 2020, ದಿನಾಂಕ:06.03.2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಹುಕ್ಕೇರಿ, ಜಬಾಪುರ, ನೇರ್ಲಿ, ಮಸರಗುಪ್ಪಿ ಮತ್ತು ಅರ್ಜುನವಾಡ ಗ್ರಾಮಗಳ 1200 ಹೆಕ್ಟೇರ್ ಪ್ರದೇಶಕ್ಕೆ ಹಿರಣ್ಯಕೇಶಿ ನದಿಯಿಂದ ನೀರನ್ನು ಎತ್ತಿ ನೀರಾವರಿ ಕಲ್ಪಿಸುವ 0.11 ಟಿಎಂಸಿ ನೀರಿನ ಹಂಚಿಕೆಯ ಶ್ರೀ ಶಂಕರಲಿಂಗ ಏತ ನೀರಾವರಿ ಯೋಜನೆಯ ರೂ.67.40 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಸಂಖ್ಯೆ: ಆಇ 408 ಆಕೋ-1/ 2020,(ಇ-ಆಫೀಸ್) ದಿನಾಂಕ:15.01.2021ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ. ಜಯಚಂದ್ರರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-4)
ಜಲ ಸಂಪನ್ಮೂಲ ಇಲಾಖೆ.

**ಇವರಿಗೆ:**
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಸರ್ಕಾರಿ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು ಇವರಿಗೆ ಮುಂದಿನ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಗೊಳಿಸುವಂತೆ ಹಾಗೂ ಪ್ರಕಟಿಸಿದ 100 ಪ್ರತಿಗಳನ್ನು ಇಲಾಖೆಗೆ ಕಳುಹಿಸಿಕೊಡುವಂತೆ ಕೋರಲಾಗಿದೆ.

**ಪ್ರತಿಯನ್ನು:**
1) ಮಹಾಲೇಖಪಾಲರು (ಎ & ಇ ) (ಇ & ಆರ್ ಎಸ್ ಎ ) ಜಿ & ಎಸ್ ಎಸ್ ಎ ) ಕರ್ನಾಟಕ, ಬೆಂಗಳೂರು.
2) ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
3) ಮಾನ್ಯ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ಸಚಿವ ಸಂಪುಟ ಶಾಖೆ), ವಿಧಾನಸೌಧ, ಬೆಂಗಳೂರು (ಸಚಿವ ಸಂಪುಟ ಸಂಖ್ಯೆ :ಸಿ:36, ದಿನಾಂಕ:18.02.2021ರ ಮೇರೆಗೆ)
4) ಸರ್ಕಾರದ ಉಪ ಕಾರ್ಯದರ್ಶಿ, (ಸಚಿವ ಸಂಪುಟ ಶಾಖೆ), (ಸಚಿವ ಸಂಪುಟ ಸಂಖ್ಯೆ:ಸಿ:36, ದಿನಾಂಕ:18.02.2021ರ ಮೇರೆಗೆ)
5) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.

--3

6) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
7) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
8) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
9) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
10) ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
11) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
12) ಮುಖ್ಯ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ ನಿಯಮಿತ ನೀರಾವರಿ (ಉತ್ತರ) ಬೆಳಗಾವಿ.
13) ಮುಖ್ಯ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು,
14) ವಿಶೇಷಾಧಿಕಾರಿ ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ ( ಆರ್ಥಿಕ ಕೋಶ), ವಿಧಾನಸೌಧ, ಬೆಂಗಳೂರು.
15) ಸರ್ಕಾರದ ಉಪ ಕಾರ್ಯದರ್ಶಿ (ಕೆಬಿಜೆಎನ್), ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
16) ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
17) ನಿರ್ದೇಶಕರು, ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು, 10 ಪ್ರತಿಗಳು.
18) ತಾಂತ್ರಿಕ ಸಹಾಯಕರು, ಜಲಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು.
19) ಶಾಖಾ ರಕ್ಷಾ ಕಡತ/ ಹೆಚ್ಚಿನ ಪ್ರತಿ.